## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2022-23ನೇ ಸಾಲಿನ ಪಂಚಾಯತ್ ರಾಜ್ ಸಂಸ್ಥೆಗಳ ಕಟ್ಟಡಗಳ ಯೋಜನೆಯಡಿ ತಾಲ್ಲೂಕು ಪಂಚಾಯತಿ ಕಟ್ಟಡಗಳಿಗೆ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ:

1. ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು, ಇವರ ಟಿಪ್ಪಣಿ ಸಂಖ್ಯೆ:ಇಕ&ಸಂಸ/ಟಿ/807/2022 ದಿನಾಂಕ:16.02.2022 ಹಾಗೂ ಸಂಖ್ಯೆ:ಇಕ&ಸಂಸ/ಟಿ/808/ 2022 ದಿನಾಂಕ:16.02.2022.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ದಕ್ಷಿಣ ಕನ್ನಡ ರವರ ಪತ್ರ ಸಂಖ್ಯೆ:ದಕಜಿಪ/ಯೋ/ ಸಸಾಲ-2/ಸಿಆರ್/42/2021-22, ದಿನಾಂಕ:01-12-2021.

ಪ್ರಸ್ತಾವನೆ:

ಮೇಲೆ ಓದಲಾದ(1)ರ ಟಿಪ್ಪಣಿಯಲ್ಲಿ ಉಡುಪಿ ಜಿಲ್ಲೆ, ಕಾರ್ಕಳ ವಿಧಾನ ಸಭಾ ಕ್ಷೇತ್ರದ ಹೆಬ್ರಿ ತಾಲ್ಲೂಕಿನಲ್ಲಿ ಹೆಬ್ರಿ ತಾಲ್ಲೂಕು ಪಂಚಾಯತಿ ಕಾರ್ಯಾಲಯದ ಅವಶ್ಯಕತೆ ಇದ್ದು ಪಂಚಾಯತ್ ಕಟ್ಟಡ ಕಾಮಗಾರಿಗೆ ರೂ.2.00 ಕೋಟಿಗಳ ಅನುದಾನ ಬಿಡುಗಡೆ ಮಾಡುವಂತೆ ಹಾಗೂ ಉಡುಪಿ ಜಿಲ್ಲೆ, ಕಾರ್ಕಳ ತಾಲ್ಲೂಕು ಪಂಚಾಯತಿ ಕಟ್ಟಡ ಕಾಮಗಾರಿ ಪ್ರಗತಿಯಲ್ಲಿದ್ದು, ಸದರಿ ಕಾಮಗಾರಿ ಕಟ್ಟಡಕ್ಕೆ ರೂ.1.64 ಕೋಟಿಗಳ ಅನುದಾನ ಬಿಡುಗಡೆಯಾಗಿರುತ್ತದೆ. ಸದರಿ ಕಟ್ಟಡಕ್ಕೆ ಹೆಚ್ಚುವರಿಯಾಗಿ ರೂ.30.00 ಲಕ್ಷಗಳ ಅನುದಾನ ಅವಶ್ಯಕತೆ ಇದ್ದು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಮೇಲೆ ಓದಲಾದ(2)ರ ಪತ್ರದನ್ವಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಕ್ಷಿಣ ಕನ್ನಡ ಇವರು ಸರ್ಕಾರಕ್ಕೆ ಸಲ್ಲಿಸಿರುವ ಪತ್ರದಲ್ಲಿ ದಿನಾಂಕ:14-10-2019ರ ಅಧಿಸೂಚನೆಯನ್ವಯ ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ತಾಲ್ಲೂಕಿನಿಂದ 12 ಗ್ರಾಮ ಪಂಚಾಯತ್‌ಗಳು ಬೇರ್ಪಟ್ಟು, ಒಟ್ಟು 12 ಗ್ರಾಮ ಪಂಚಾಯತಿಗಳನ್ನೊಳಗೊಂಡು ಹೊಸದಾಗಿ ಮೂಡಬಿದರೆ ತಾಲ್ಲೂಕು ರಚನೆಯಾಗಿರುತ್ತದೆ. ಆ ಪ್ರಕಾರ ಸರ್ಕಾರಿ ಶಾಲೆ ಮಾರ್ಪಾಡಿಯಲ್ಲಿ ತಾತ್ಕಾಲಿಕ ನೆಲೆಯಲ್ಲಿ ತಾಲ್ಲೂಕು ಪಂಚಾಯತಿ ಕಛೇರಿಯನ್ನು ಪ್ರಾರಂಭಿಸಲಾಗಿದೆ. ಸುವ್ಯವಸ್ಥಿತ ಕಟ್ಟಡ ಲಭ್ಯವಾಗದ ಕಾರಣ ದೈನಂದಿನ ಆಡಳಿತ ವ್ಯವಸ್ಥೆಗೆ ತೊಂದರೆಯಾಗಿದೆ. ಹೊಸ ಕಟ್ಟಡ ನಿರ್ಮಾಣದ ಬಗ್ಗೆ ಮೂಡಬಿದರೆ ಮಾರ್ಪಾಡಿ ಗ್ರಾಮದ ಸರ್ವೆ ನಂ.321/1-ಎ ರಲ್ಲಿ 0.87 ಎಕರೆ ಜಾಗ ಗುರುತಿಸಲಾಗಿದೆ ಹಾಗೂ ಮಂಜೂರಾತಿ ಹಂತದಲ್ಲಿರುತ್ತದೆ. ಆದುದರಿಂದ ಮೂಡಬಿದರೆ ತಾಲ್ಲೂಕು ಪಂಚಾಯತಿಯ ಸುಗಮ ಆಡಳಿತ ನಿರ್ವಹಣೆ ವ್ಯವಸ್ಥೆಗಾಗಿ ಸುಸಜ್ಜಿತ ಹೊಸ ಕಛೇರಿ ಕಟ್ಟಡ ನಿರ್ಮಾಣವು ಅತೀ ಅವಶ್ಯಕವಾಗಿರುವುದರಿಂದ ಹೊಸ ಕಟ್ಟಡ ನಿರ್ಮಾಣದ ಬಗ್ಗೆ ರೂ.475.00 ಲಕ್ಷ ಅಂದಾಜು ಮೊತ್ತಕ್ಕೆ ಅಂದಾಜು ಪಟ್ಟಿ ತಯಾರಿಸಿ ತಾಂತ್ರಿಕವಾಗಿ ಪರಿಶೀಲಿಸಿ, ಅನುದಾನ ಬಿಡುಗಡೆಗಾಗಿ ಕಾರ್ಯಕಾರಿ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ದಕ್ಷಿಣ ಕನ್ನಡ ಇವರು ದಿನಾಂಕ:20-11-2021 ರಲ್ಲಿ ಅಂದಾಜು ಪಟ್ಟಿಯೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಸದರಿ ಪ್ರಸ್ತಾವನೆ ಹಾಗೂ ಅಂದಾಜು ಪಟ್ಟಿಯನ್ವಯ ಮೂಡಬಿದರೆ ತಾಲ್ಲೂಕು ಪಂಚಾಯತ್ ಹೊಸ ಕಟ್ಟಡ ನಿರ್ಮಾಣಕ್ಕಾಗಿ ರೂ.475.00 ಲಕ್ಷಗಳ ವಿಶೇಷ ಅನುದಾನ ಮಂಜೂರು ಮಾಡಲು ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ, 2022-23ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ:4515-00-102-1-03 (ಪಂಚಾಯತ್

ಲಕ್ಷಗಳನ್ನು ಈ ಕೆಳಕಂಡ ಕೋಷ್ಟಕದನ್ವಯ ತಾಲ್ಲೂಕು ಪಂಚಾಯತಿ ಕಟ್ಟಡ ಕಾಮಗಾರಿಗಳಿಗೆ ಬಿಡುಗಡೆಗೊಳಿಸಲು ನಿರ್ಧರಿಸಿದೆ.

(ರೂ. ಲಕ್ಷಗಳಲ್ಲಿ)

| ಕ್ರ.ಸಂ. | ತಾಲ್ಲೂಕು ಪಂಚಾಯತಿ | ಅನುದಾನ |
|---|---|---|
| 1. | ಹೆಬ್ರಿ | 147.00 |
| 2. | ಕಾರ್ಕಳ | 30.00 |
| 3. | ಮೂಡಬಿದರೆ | 147.00 |
| | ಒಟ್ಟು | 324.00 |

ಆದುದರಿಂದ, ಈ ಕೆಳಕಂಡ ಆದೇಶ.

<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 99 ಜಿಪಸ 2021, ದಿನಾಂಕ:19-04-2022</u>

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, 2022-23ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ: 4515-00-102-1-03(ಪಂಚಾಯತ್ ರಾಜ್ ಸಂಸ್ಥೆಗಳ ಕಟ್ಟಡಗಳು)ರಡಿ ಹಂಚಿಕೆ ಮಾಡಿರುವ ರೂ.1000.00 ಲಕ್ಷಗಳ ಅನುದಾನದಲ್ಲಿ ಈ ಕೆಳಕಂಡ ಕೋಷ್ಟಕದನ್ವಯ ತಾಲ್ಲೂಕು ಪಂಚಾಯತಿ ಕಟ್ಟಡ ಕಾಮಗಾರಿಗಳಿಗೆ ರೂ.324.00 ಲಕ್ಷಗಳನ್ನು ಬಿಡುಗಡೆಗೊಳಿಸಿ ಆದೇಶಿಸಿದೆ.

(ರೂ. ಲಕ್ಷಗಳಲ್ಲಿ)

| ಕ್ರ.ಸಂ. | ತಾಲ್ಲೂಕು ಪಂಚಾಯತಿ | ಅನುದಾನ |
|---|---|---|
| 1. | ಹೆಬ್ರಿ | 147.00 |
| 2. | ಕಾರ್ಕಳ | 30.00 |
| 3. | ಮೂಡಬಿದರೆ | 147.00 |
| | ಒಟ್ಟು | 324.00 |

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಆಇ 01 ಟಿಎಫ್‌ಪಿ 2022, ದಿನಾಂಕ:04-04-2022ರಲ್ಲಿ ಸಂಬಂಧಿಸಿದ ಇಲಾಖಾ ಅಪರ ಮುಖ್ಯ ಕಾರ್ಯದರ್ಶಿ/ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿರವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ.ಎಂ.ರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ. ಸಂ.5308) ಬೆಂಗಳೂರು.

2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಉಡುಪಿ ಮತ್ತು ದಕ್ಷಿಣ ಕನ್ನಡ.
5. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್, ಕಾರ್ಕಳ, ಹೆಬ್ರಿ ಮತ್ತು ಮೂಡಬಿದರೆ.
6. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿಯನ್ನು ಮಾಹಿತಿಗಾಗಿ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಹಿರಿಯ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಜಂಟಿ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

19/04/2022.

ಹೊರಡಿಸಿದ 28/4
ದಿನಾಂಕ
"ಗ್ರಾಮೀಣಾಭಿವೃದ್ಧಿ ಮತ್ತು ಪಂ ರಾಜ್ ಇಲಾಖೆ"



Office by SYED EKBAL, RDPR-Asst(SE), ASSISTANT, RDPR SEC on 27/06/2022 12:39 PM

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ದಕ್ಷಿಣ ಕನ್ನಡ ಜಿಲ್ಲೆಯ ಕಡಬ ತಾಲ್ಲೂಕು ಪಂಚಾಯತ್ ಕಟ್ಟಡ ನಿರ್ಮಾಣಕ್ಕೆ ಅನುದಾನ ಬಿಡುಗಡೆಗೊಳಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಕೆಪಿಆರ್‌ಸಿ/ಡಿಪಿ-4/ಪಿಪಿ/6/2020, ದಿನಾಂಕ:01-12-2020.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಕ್ಷಿಣ ಕನ್ನಡ ಇವರ ಪತ್ರ ಸಂಖ್ಯೆ: ದಕಜಿಪಂ/ಯೋ/ಸಸಾಅ-2/ಸಿಆರ್/39/2021-22, ದಿನಾಂಕ:25-04-2022.

**ಪ್ರಸ್ತಾವನೆ:**

ಮೇಲೆ ಓದಲಾದ(1)ರ ಆದೇಶದನ್ವಯ ಕಡಬ ತಾಲ್ಲೂಕು ಪಂಚಾಯತಿ ಕಛೇರಿಯ ಹೊಸ ಕಟ್ಟಡ ನಿರ್ಮಾಣದ ಕುರಿತು ರೂ.450.00ಲಕ್ಷಗಳ ಅಂದಾಜುಪಟ್ಟಿಗೆ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದ್ದು, 2020-21ನೇ ಸಾಲಿನ ಜಿಲ್ಲಾ ಪಂಚಾಯತಿ ಅನುದಾನದಡಿ ಕಟ್ಟಡ ನಿರ್ಮಾಣ ಯೋಜನೆಯ ಲೆಕ್ಕ ಶೀರ್ಷಿಕೆ:2515-00-101-029ರಡಿ ರೂ.140.00ಲಕ್ಷಗಳನ್ನು ನಿಗಧಿಪಡಿಸಿಕೊಂಡು ಟೆಂಡರ್ ಕರೆದು ಪ್ರಾರಂಭಿಸಲಾಗಿರುವ ಕಾಮಗಾರಿಗಾಗಿ ಈಗಾಗಲೇ 2020-21ನೇ ಸಾಲಿನ ಜಿಲ್ಲಾ ಪಂಚಾಯತಿ ಅನುದಾನದಡಿ ಕಟ್ಟಡ ನಿರ್ಮಾಣ ಯೋಜನೆಯ ಲೆಕ್ಕ ಶೀರ್ಷಿಕೆ:2515-00-101-029ರಡಿ ಬಿಡುಗಡೆಗೊಳಿಸಿದ ರೂ.140.00ಲಕ್ಷಗಳನ್ನು ಗುತ್ತಿಗೆದಾರರಿಗೆ ಪಾವತಿಸಲಾಗಿರುತ್ತದೆ. ಪ್ರಸ್ತುತ, ಶೇ.90ರಷ್ಟು ಕಾಮಗಾರಿಯು ಪೂರ್ಣಗೊಂಡು ಮುಕ್ತಾಯದ ಹಂತದಲ್ಲಿದೆ ಎಂದು ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಇವರು ನೀಡಿರುವ ವರದಿಯ ಮೇರೆಗೆ ಆಡಳಿತಾತ್ಮಕ ಮಂಜೂರಾತಿಯನ್ವಯ ಬಾಕಿ ಇರುವ ಮೊತ್ತ ರೂ.310.00ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಮೇಲೆ ಓದಲಾದ (2)ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಕ್ಷಿಣ ಕನ್ನಡ ಇವರು ಸರ್ಕಾರವನ್ನು ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ, ಕಡಬ ತಾಲ್ಲೂಕು ಪಂಚಾಯತಿ ಸುಗಮ ಕಾರ್ಯನಿರ್ವಹಣೆಗಾಗಿ ಸುಸಜ್ಜಿತವಾದ ಹೊಸ ಕಟ್ಟಡ ನಿರ್ಮಿಸಲು ತಯಾರಿಸಲಾಗಿರುವ ರೂ.450.00ಲಕ್ಷಗಳ ಅಂದಾಜುಪಟ್ಟಿಗೆ ನೀಡಿರುವ ತಾಂತ್ರಿಕ ಹಾಗೂ ಆಡಳಿತಾತ್ಮಕ ಮಂಜೂರಾತಿಯನ್ವಯ ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತಿಯಿಂದ 2020-21ನೇ ಸಾಲಿನ ಪಂಚಾಯತ್ ರಾಜ್ ಸಂಸ್ಥೆಗಳ ಕಛೇರಿ ಕಟ್ಟಡ ನಿರ್ಮಾಣ ಯೋಜನೆಯ ಲೆಕ್ಕ ಶೀರ್ಷಿಕೆ:**2515-00-101-0-26**ರಡಿ ರೂ.140.00ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದ್ದು, ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಇವರ ವರದಿಯನ್ವಯ ಬಾಕಿ ಇರುವ ಮೊತ್ತ ರೂ.310.00ಲಕ್ಷಗಳನ್ನು ಹೊಸದಾಗಿ ಸೃಜನೆಯಾದ ಕಡಬ ತಾಲ್ಲೂಕು ಪಂಚಾಯತಿ ಕಚೇರಿ ಕಟ್ಟಡ ನಿರ್ಮಾಣದ ಕಾಮಗಾರಿಗಾಗಿ 2022-23ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ:**4515-00-102-1-03-386**ರಡಿ ಭರಿಸಿ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕಡಬ ಇವರ ಖಜಾನೆ-2ರ ಡಿಡಿಓ ಕೋಡ್‌ಗೆ ಬಿಡುಗಡೆಗೊಳಿಸಲು ನಿರ್ಧರಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 509 ಜಿಪಸ 2020, ದಿನಾಂಕ:13-05-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಗಣನೆಗೆ ತೆಗೆದುಕೊಂಡು, ಕಡಬ ತಾಲ್ಲೂಕು ಪಂಚಾಯತಿಯ ಸುಗಮ ಕಾರ್ಯನಿರ್ವಹಣೆಗಾಗಿ ಸುಸಜ್ಜಿತವಾದ ಹೊಸ ಕಟ್ಟಡ ನಿರ್ಮಿಸಲು ತಯಾರಿಸಲಾಗಿರುವ ರೂ.450.00ಲಕ್ಷಗಳ ಅಂದಾಜುಪಟ್ಟಿಗೆ ನೀಡಿರುವ ತಾಂತ್ರಿಕ ಹಾಗೂ ಆಡಳಿತಾತ್ಮಕ ಮಂಜೂರಾತಿಯನ್ವಯ ಬಾಕಿ ಇರುವ ಮೊತ್ತ ರೂ.310.00(ಮೂರು ನೂರ ಹತ್ತು ಲಕ್ಷಗಳು ಮಾತ್ರ)ಲಕ್ಷಗಳನ್ನು 2022-23ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ: 4515-00-102-1-03-386ರಡಿ ಭರಿಸಿ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕಡಬ ಇವರ ಖಜಾನೆ-2 ಡಿಡಿಒ ಕೋಡ್‌ಗೆ ಬಿಡುಗಡೆಗೊಳಿಸಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಆಇ 01 ಟಿಎಫ್‌ಪಿ 2022, ದಿನಾಂಕ: 04-04-2022ರಲ್ಲಿ ಸಂಬಂಧಿಸಿದ ಇಲಾಖಾ ಅಪರ ಮುಖ್ಯ ಕಾರ್ಯದರ್ಶಿ/ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿರವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

[illegible] 13/5
ದಿನಾಂಕ
ಗ್ರಾಮೀಣಾಭಿವೃದ್ಧಿ ಮತ್ತು ಪಂ ರಾಜ್ ಇಲಾಖೆ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

13/5/22
(ಎಂ.ಎಂ.ರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
13/5/22

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ). ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಕ್ಷಿಣ ಕನ್ನಡ.
5. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
6. ಲೆಕ್ಕಾಧಿಕಾರಿ (ಜಿ.ಪಂ), ವೆಚ್ಚ-6, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
7. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಕಡಬ.
8. ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕಡಬ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ.
9. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.



erated from eOffice by SYED EKBAL, RDPR-Asst(SE), ASSISTANT, RDPR SEC on 27/06/2022 12:41 PM

ಪ್ರತಿಯನ್ನು ಮಾಹಿತಿಗಾಗಿ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಹಿರಿಯ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಜಂಟಿ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
4. ನಿರ್ದೇಶಕರು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2022-23ನೇ ಸಾಲಿನ ಪಂಚಾಯತ್ ರಾಜ್ ಸಂಸ್ಥೆಗಳ ಕಟ್ಟಡಗಳ ಯೋಜನೆಯಡಿ ಸೊರಬ ತಾಲ್ಲೂಕು ಪಂಚಾಯತಿ ಕಟ್ಟಡ ನಿರ್ಮಾಣಕ್ಕಾಗಿ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ:

ಮಾನ್ಯ ಶಾಸಕರು, ಸೊರಬ ವಿಧಾನ ಸಭಾ ಕ್ಷೇತ್ರ ಅಧ್ಯಕ್ಷರು, ಅಧೀನ ಶಾಸನ ರಚನಾ ಸಮಿತಿ ವಿಧಾನ ಮಂಡಲ, ಬೆಂಗಳೂರು ಇವರ ಪತ್ರ ಸಂಖ್ಯೆ:MLA/SORAB/226/2021, ದಿನಾಂಕ:18-08-2021.

ಪ್ರಸ್ತಾವನೆ:

ಮೇಲೆ ಓದಲಾದ ಪತ್ರದನ್ವಯ ಶಿವಮೊಗ್ಗ ಜಿಲ್ಲೆಯ ಸೊರಬ ತಾಲ್ಲೂಕು ಹಿಂದುಳಿದ ತಾಲ್ಲೂಕಾಗಿದ್ದು, ಕ್ಷೇತ್ರದ ಅಭಿವೃದ್ಧಿ ದೃಷ್ಟಿಯಿಂದ ಸೊರಬ ತಾಲ್ಲೂಕಿನಲ್ಲಿ ನೂತನ ತಾಲ್ಲೂಕು ಪಂಚಾಯತಿ ಕಟ್ಟಡದ ಅವಶ್ಯಕತೆಯಿದ್ದು, ರೂ.6.00ಕೋಟಿಗಳ ಅನುದಾನ ಬಿಡುಗಡೆ ಮಾಡುವಂತೆ ಆರ್.ಟಿ.ಸಿ.ಯನ್ನು ಸಲ್ಲಿಸುತ್ತಾ ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ, 2022-23ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ:4515-00-102-1-03(ಪಂಚಾಯತ್ ರಾಜ್ ಸಂಸ್ಥೆಗಳ ಕಟ್ಟಡಗಳು)ರಡಿ ಹಂಚಿಕೆ ಮಾಡಿರುವ ರೂ.1000.00 ಲಕ್ಷಗಳ ಅನುದಾನದಲ್ಲಿ ಉಳಿದ ರೂ.366.00 ಲಕ್ಷಗಳನ್ನು ಸೊರಬ ತಾಲ್ಲೂಕು ಪಂಚಾಯತಿ ಕಟ್ಟಡ ನಿರ್ಮಾಣಕ್ಕಾಗಿ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸೊರಬ ಇವರ ಖಜಾನೆ-2 ರ ಡಿ.ಡಿ.ಓ ಕೋಡ್ ಗೆ ಬಿಡುಗಡೆಗೊಳಿಸಲು ನಿರ್ಧರಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

### ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪಂರಾ 230 ಜಿಪಸ 2022, ದಿನಾಂಕ:22-08-2022

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, 2022-23ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ:4515-00-102-1-03 (ಪಂಚಾಯತ್ ರಾಜ್ ಸಂಸ್ಥೆಗಳ ಕಟ್ಟಡಗಳು)ರಡಿ ಹಂಚಿಕೆ ಮಾಡಿರುವ ರೂ.1000.00 ಲಕ್ಷಗಳ ಅನುದಾನದಲ್ಲಿ ರೂ.366.00(ಮೂರು ನೂರ ಅರವತ್ತಾರು ಲಕ್ಷಗಳು ಮಾತ್ರ)ಲಕ್ಷಗಳನ್ನು ಸೊರಬ ತಾಲ್ಲೂಕು ಪಂಚಾಯತಿ ಕಟ್ಟಡ ನಿರ್ಮಾಣಕ್ಕಾಗಿ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸೊರಬ ಇವರ ಖಜಾನೆ-2 ರ ಡಿ.ಡಿ.ಓ ಕೋಡ್ ಗೆ ಬಿಡುಗಡೆಗೊಳಿಸಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಆಇ 01 ಟಿಎಫ್‌ಪಿ 2022, ದಿನಾಂಕ:04-04-2022ರಲ್ಲಿ ಸಂಬಂಧಿಸಿದ ಇಲಾಖಾ ಅಪರ ಮುಖ್ಯ ಕಾರ್ಯದರ್ಶಿ/ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿರವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
22/8/22
(ಎಂ.ಎಂ.ರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

22/8/22

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು



Generated from eOffice by SYED EKBAL, RDPR-Asst(SE), ASSISTANT, RDPR SEC on 25/08/2022 06:08 PM

2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಶಿವಮೊಗ್ಗ.
5. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್, ಸೊರಬ.
6. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ.
7. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.

ಪ್ರತಿಯನ್ನು ಮಾಹಿತಿಗಾಗಿ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಹಿರಿಯ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ ಇವರ ಆಪ್ತ ಸಹಾಯಕರು, ಕೆ.ಜಿ.ರಸ್ತೆ, ಬೆಂಗಳೂರು.
4. ಸರ್ಕಾರದ ಜಂಟಿ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

23/8/2022

23/8/2022

23/8



Generated from eOffice by SYED EKBAL, RDPR-Asst(SE), ASSISTANT, RDPR SEC on 25/08/2022 06:08 PM